## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2015-16ನೇ ಸಾಲಿನಲ್ಲಿ ಶ್ರೀ ಕಾಳಭೈರವೇಶ್ವರ ಸ್ವಾಮಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಬೆಂಗಳೂರು ಇಲ್ಲಿನ ಬಿ.ಎ.ಎಂ.ಎಸ್., ಪದವಿ ಕೋರ್ಸ್‌ನ ಸೀಟುಗಳ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಿಕೊಳ್ಳಲು ಹಾಗೂ 05 ಸ್ನಾತಕೋತ್ತರ ಕೋರ್ಸ್‌ನ ಪ್ರವೇಶ ಮಿತಿಯನ್ನು ಹೆಚ್ಚಿಸಲು ಅನುಮತಿ ನೀಡಿ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:** 1. ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರ ಸಂಖ್ಯೆ: F.No.R-13011/09/2014-EP(IM-1), ದಿನಾಂಕ:04.09.2015

2. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರಸಂಖ್ಯೆ:ಆಯುಷ್/62/ಅಭಿವೃದ್ಧಿ(1)/2015-16, ದಿ:09.09.2015.

****

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರದಲ್ಲಿ ಶ್ರೀ ಕಾಳಭೈರವೇಶ್ವರ ಸ್ವಾಮಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಹಾಲಿ ಇರುವ ಬಿ.ಎ.ಎಂ.ಎಸ್., ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 60 ಸೀಟುಗಳಿಂದ 100 ಸೀಟುಗಳಿಗೆ ಹೆಚ್ಚಿಸಿಕೊಳ್ಳಲು ಹಾಗೂ 05 ಸ್ನಾತಕೋತ್ತರ ಕೋರ್ಸುಗಳ ಪ್ರವೇಶ ಮಿತಿಯನ್ನು 05 ರಿಂದ 06 ಸೀಟುಗಳಿಗೆ ಹೆಚ್ಚಿಸಿಕೊಳ್ಳಲು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿಯನ್ನು ನೀಡಲಾಗಿದೆ.,

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರು ಶ್ರೀ ಕಾಳಭೈರವೇಶ್ವರ ಸ್ವಾಮಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಹಾಲಿ ಇರುವ ಬಿ.ಎ.ಎಂ.ಎಸ್., ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 60 ಸೀಟುಗಳಿಂದ 100 ಸೀಟುಗಳಿಗೆ ಹೆಚ್ಚಿಸಿಕೊಳ್ಳಲು ಹಾಗೂ 05 ಸ್ನಾತಕೋತ್ತರ ಕೋರ್ಸುಗಳ ಪ್ರವೇಶ ಮಿತಿಯನ್ನು 05 ರಿಂದ 06 ಸೀಟುಗಳಿಗೆ ಹೆಚ್ಚಿಸಿಕೊಳ್ಳಲು ರಾಜ್ಯ ಸರ್ಕಾರವು ನೀಡಿರುವ ನಿರಾಕ್ಷೇಪಣಾ ಪತ್ರದ ಆಧಾರದ ಮೇಲೆ ಕೇಂದ್ರ ಸರ್ಕಾರವು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿ ನೀಡಿದೆ. ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕೂಡ Consent of Affiliation ನೀಡಿದೆಯೆಂದು ತಿಳಿಸುತ್ತಾ, ಸದರಿ ಅನುಮತಿ ಪ್ರಮಾಣ ಪತ್ರಗಳ ಆಧಾರದ ಮೇಲೆ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 234 ಪಿಟಿಡಿ 2015, ಬೆಂಗಳೂರು, ದಿನಾಂಕ: 05.10.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕಾಳಭೈರವೇಶ್ವರ ಸ್ವಾಮಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಹಾಲಿ ಇರುವ ಬಿ.ಎ.ಎಂ.ಎಸ್., ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 60 ಸೀಟುಗಳಿಂದ 100 ಸೀಟುಗಳಿಗೆ ಹೆಚ್ಚಿಸಿಕೊಳ್ಳಲು ಹಾಗೂ 05 ಸ್ನಾತಕೋತ್ತರ ಕೋರ್ಸುಗಳಾದ 1) ಪ್ರಸೂತಿ ತಂತ್ರ ಮತ್ತು ಸ್ತ್ರೀರೋಗ, 2) ಕಾಯಚಿಕಿತ್ಸಾ, 3) ಶಲ್ಯತಂತ್ರ, 4) ಶಾಲಾಕ್ಯತಂತ್ರ ಮತ್ತು 5) ಪಂಚಕರ್ಮ ಈ

ಐದು ತಜ್ಞತೆಗಳಲ್ಲಿ ಪ್ರವೇಶ ಮಿತಿಯನ್ನು ೦೫ ರಿಂದ ೦೬ ಸೀಟುಗಳಿಗೆ ಹೆಚ್ಚಿಸಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿದೆ.

1. ಸರ್ಕಾರಿ ಸೀಟುಗಳ ಹಂಚಿಕೆ ಮತ್ತು ಶುಲ್ಕಗಳ ಬಗ್ಗೆ ಹಾಲಿ ಜಾರಿಯಲ್ಲಿರುವ ಎಲ್ಲಾ ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
2. ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ವಿಧಿಸುವ ಷರತ್ತುಗಳನ್ನು ಪೂರೈಸತಕ್ಕದ್ದು.
4. ಸದರಿ ಕೋರ್ಸಿಗೆ ಸಂಬಂಧಿಸಿದಂತೆ ಕಾಲೇಜಿಗೆ ರಾಜ್ಯ ಸರ್ಕಾರದಿಂದ ಯಾವುದೇ ಅನುದಾನ ಹಾಗೂ ಸೌಲಭ್ಯ ನೀಡಲಾಗುವುದಿಲ್ಲ.
5. ಅನುಮೋದಿತ ಪದವಿ ಕೋರ್ಸ್‌ನ ಸೀಟುಗಳಲ್ಲಿ ಶೇಕಡ 20ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಬಿಟ್ಟುಕೊಡತಕ್ಕದ್ದು.
6. ಶುಲ್ಕ ವಿಧಿಸುವ ಬಗ್ಗೆ ಸರ್ಕಾರವು ವಿಧಿಸಿರುವ/ವಿಧಿಸಬಹುದಾದ ಷರತ್ತುಗಳು/ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
7. ಕೇಂದ್ರ ಸರ್ಕಾರ/ರಾಜ್ಯ ಸರ್ಕಾರ ವಿಧಿಸಿರುವ ಹಾಗೂ ವಿಧಿಸಬಹುದಾದ ಎಲ್ಲಾ ಷರತ್ತುಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
8. ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಲಗ್ನತೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾ.ವೈ.ಪ ಮತ್ತು ಪಸ್ವೀರ ಶಾಖೆ)
(ದೂರವಾಣಿ ಸಂಖ್ಯೆ:22034292)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು- 560 001
2. ಕುಲಪತಿಗಳು/ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
4. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು-9.
5. ಪ್ರಾಂಶುಪಾಲರು, ಶ್ರೀ ಕಾಳಭೈರವೇಶ್ವರ ಸ್ವಾಮಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ರಿಸರ್ಚ್ ಸೆಂಟರ್, ನಂ: 10, ಪೈಪ್‌ಲೈನ್ ರಸ್ತೆ, ಆರ್.ಪಿ.ಸಿ ಲೇಔಟ್, ವಿಜಯನಗರ 2ನೇ ಹಂತ, ಬೆಂಗಳೂರು-560104.
6. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
8. ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.